<u>ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಮೂಡಿಗೆರೆ</u>

<u>ಸಿ.ಸಿ. ಸಂಖ್ಯೆ **916/2025**</u>

<u>ಪಿರ್ಯಾದಿ</u> : ಶ್ರೀ ಹೆಚ್.ಬಿ.ಸುಪ್ರೀಮ್,
ವಯಸ್ಸು ಸುಮಾರು 43 ವರ್ಷ,
ಬಿನ್ ಹೆಚ್.ಟಿ.ಬೆಟ್ಟೇಗೌಡ,
ಕೃಷಿಕ ಮತ್ತು ಕಾಫೀ ಪ್ಲಾಂಟರ್,
ಹೆಗ್ಗರವಳ್ಳಿ ಗ್ರಾಮ, ಹುರುಡಿ ಅಂಚೆ,
ಗೋಣಿಬೀಡು ಹೋಬಳಿ,
ಮೂಡಿಗೆರೆ ತಾಲ್ಲೂಕು-577 132,
ಚಿಕ್ಕಮಗಳೂರು ಜಿಲ್ಲೆ.

ವಿರುದ್ಧ

<u>ಆರೋಪಿ</u> : ಶ್ರೀಮತಿ ರತ್ನ, ವಯಸ್ಸು ಸುಮಾರು 50 ವರ್ಷ,
ಕೋಂ ದಿಃ ಕೆಂಚಯ್ಯ, ಕೂಲಿ ಗುತ್ತಿಗೆದಾರರು ಮತ್ತು
ಹೋಂ-ಸ್ಟೇ ಕೆಲಸಗಾರರ, ವಾಸಃ ಹುರುಡಿ ಗ್ರಾಮ
ಮತ್ತು ಅಂಚೆ, ಹಾನುಬಾಳು ಹೋಬಳಿ,
ಸಕಲೇಶಪುರ ತಾಲ್ಲೂಕು-573 165,
ಹಾಸನ ಜಿಲ್ಲೆ.

<u>ಆಪಾದನೆಯ ಸಾರಾಂಶ</u>

ಶ್ರೀ ವಿಶ್ವನಾಥ್ ಎ., ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಮೂಡಿಗೆರೆ, ಆದ ನಾನು, ಆರೋಪಿಯಾದ ನಿಮ್ಮ ಮೇಲೆ ಮಾಡುವ ಆಪಾದನೆ ಏನೆಂದರೆಃ-

ಆರೋಪಿಯಾದ ನೀವು ಪಿರ್ಯಾದುದಾರರನ್ನು ಸಂಪರ್ಕಿಸಿ, ಅವರಿಂದ ದಿನಾಂಕ 27.10.2024 ರಂದು 1,30,000/- ರೂಪಾಯಿಗಳನ್ನು ಸಾಲವಾಗಿ ಪಡೆದಿದ್ದು, ಸದರಿ ಹಣದ ಮರುಪಾವತಿಗಾಗಿ ನಿಮ್ಮ ಖಾತೆ ಹೊಂದಿರುವ ಕರ್ನಾಟ ಬ್ಯಾಂಕ್ ಲಿಮಿಟೆಡ್, ಹಾನುಬಾಳು ಶಾಖೆಯ ಚೆಕ್ ಸಂಖ್ಯೆ 654016, ದಿನಾಂಕ 27.01.2025, ರೂ.1,30,000/- ಎಂದು ನಮೂದಿಸಿ ನೀಡಿದ್ದು, ಸದರಿ ಚೆಕ್ ಅನ್ನು ಫಿರ್ಯಾದಿಯು ಸಿ.ಡಿ.ಸಿ.ಸಿ ಬ್ಯಾಂಕ್ ಲಿಮಿಟೆಡ್, ಮೂಡಿಗೆರೆ ಶಾಖೆಯಲ್ಲಿ ಜಮೆಗಾಗಿ ಸಲ್ಲಿಸಿದಾಗ, ನಿಮ್ಮ ಖಾತೆಯಲ್ಲಿ ಸಾಕಷ್ಟು ಹಣವಿಲ್ಲ (Funds Insufficient) ಎಂದು ಹಿಂಬರಹ ನೀಡಿರುತ್ತಾರೆ. ಕಾರಣ, ಫಿರ್ಯಾದಿಯು ದಿನಾಂಕ 05.02.2025 ರಂದು ನೋಟೀಸ್ ಮೂಲಕ ಆರೋಪಿಯಾದ ನಿಮಗೆ ಸದರಿ ವಿಚಾರವನ್ನು ತಿಳಿಸಿದರೂ ಸಹ ನೀವು ಹಣವನ್ನು ವಾಪಸ್

ಮಾಡಿರುವುದಿಲ್ಲ. ಈ ರೀತ್ಯಾ ನೀವು ನೆಗೋಷಿಬಲ್ ಇನ್ಸ್ಟ್ರುಮೆಂಟ್ ಆಕ್ಟ್ ಕಲಂ **138** ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಮಾಡಿರುವಿರಿ ಎಂದು ಆಪಾದಿಸಲಾಗಿದೆ?

ಪ್ರಃ 1. ಈಗ ಮೇಲೆ ಓದಿ ಹೇಳಿದ ಆಪಾದನೆಯನ್ನು ಕೇಳಿದ್ದೀರಾ? ಅದು ನಿಮಗೆ ಅರ್ಥವಾಯಿತೇ?

ಆರೋಪಿಯ ಉತ್ತರಃ

ಪ್ರಃ 2. ನೀವು ಆಪಾದನೆಯನ್ನು ಒಪ್ಪಿಕೊಳ್ಳುವಿರೋ ಅಥವಾ ವಿಚಾರಣೆಯಾಗಬೇಕೋ?

ಆರೋಪಿಯ ಉತ್ತರಃ

***(***ದಿನಾಂಕ 27.11.2025 ರಂದು ಆಪಾದನೆಯ ಸಾರಾಂಶವನ್ನು ಆರೋಪಿಗೆ ತಿಳಿಯುವ ಭಾಷೆಯಲ್ಲಿ ಓದಿ***,*** ಅವರ ಹೇಳಿಕೆಯನ್ನು ನನ್ನ ಸಮಕ್ಷಮದಲ್ಲಿ ಬರೆದುಕೊಳ್ಳಲಾಯಿತು***.*** ಅದು ಸತ್ಯವಾಗಿಯೂ ಮತ್ತು ಸರಿಯಾಗಿಯೂ ಇರುತ್ತದೆ ಅಂತಾ ಪ್ರಮಾಣೀಕರಿಸುತ್ತೇನೆ***)***

**Sd/-**

ಮೂಡಿಗೆರೆ
ದಿನಾಂಕಃ 27.11.2025

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆ**.**ಎಂ**.**ಎಫ್**.**ಸಿ**,** ಮೂಡಿಗೆರೆ**.**